ಸಮಸ್ತ ಕನ್ನಡಿಗರ ವಿಶ್ವಾಸದ ಸಂಜೆ ದಿನಪತ್ರಿಕೆ

ಈ ಸಂಜೆ

**Friday 25th November 2022, Page No.07**

A Program organized to welcome first year BE students: The Youth race is increasing the country's fame.

ಈ ಸಂಜೆ

# ದೇಶದ ಕೀರ್ತಿ ಹೆಚ್ಚಿಸುತ್ತಿರುವ ಯುವ ಜನಾಂಗ



**ಕೆಂಗೇರಿ, ನ.25-** ಜಾಗತೀಕರಣದ ಪ್ರಭಾವ ದಿಂದಾಗಿ ನಮ್ಮ ದೇಶದ ಯುವ ಜನಾಂಗದವರು ವಿಶ್ವದ ಇತರ ರಾಷ್ಟ್ರಗಳ ಎದುರು ತಮ್ಮ ಪ್ರತಿಭೆ ಹಾಗೂ ಕೌಶಲ್ಯಗಳನ್ನು ಅನಾವರಣಗೊಳಿಸುವ ಮೂಲಕ ದೇಶದ ಕೀರ್ತಿಯನ್ನು ಹೆಚ್ಚಿಸಿದ್ದಾರೆ ಎಂದು ವಿದೇಶಾಂಗ ವ್ಯವಹಾರಗಳ ಕೇಂದ್ರದ ಮಾಜಿ ಸಚಿವ ಎಜೆ ಅಕ್ಬರ್ ಹೇಳಿದರು.

ಬೆಂಗಳೂರು- ಮೈಸೂರು ಮುಖ್ಯರಸ್ತೆಯ ರಾವಿ ತಾಂತ್ರಿಕ ಮಹಾವಿದ್ಯಾಲಯದ ಆವರಣದಲ್ಲಿ ಪ್ರಥಮ ವರ್ಷದ ಬಿಇ ವಿದ್ಯಾರ್ಥಿಗಳ ಸ್ವಾಗತ ಕೋರಲು ಆಯೋಜಿಸಿದ್ದ ಕಾರ್ಯಕ್ರಮದಲ್ಲಿಪಾಲ್ಗೊಂಡು ಅವರು ಮಾತನಾಡಿದರು.

ಸ್ವಾತಂತ್ರ್ಯ ಪೂರ್ವ ಮತ್ತು ನಂತರದ ದಿನಗಳಲ್ಲಿ ದೇಶ ಅನೇಕ ಸವಾಲು ಮತ್ತು ಸಮಸ್ಯೆಗಳನ್ನು ಎದುರಿಸಿದರೂ ದಿಟ್ಟತನದಿಂದ ಸವಾಲುಗಳನ್ನು ಎದುರಿಸಿ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಮತ್ತು ತಂತ್ರಜ್ಞಾನದ ಬೆಳವಣಿಗೆಗಳ ಮೂಲಕ ವಿಶ್ವದ ಇತರ ರಾಷ್ಟ್ರಗಳು ಭಾರತದಡೆಗೆ ತಿರುಗಿ ನೋಡುವಂತಹ ವಾತಾವರಣ ನಿರ್ಮಾಣವಾಗಲು ಹಲವರ ಪ್ರಾಮಾಣಿಕ ಪ್ರಯತ್ನಗಳಿವೆ ಎಂದರು.

ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್ ಕಳೆದ 60 ವರ್ಷಗಳಿಂದ ಗುಣಮಟ್ಟದ ಶಿಕ್ಷಣ ಹಾಗೂ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಿ ನಿರಂತರವಾಗಿ ಶೈಕ್ಷಣಿಕ ಪ್ರಗತಿಗೆ ಕೊಡುಗೆನೀಡುವ ಮೂಲಕ ರಾಷ್ಟ್ರಹಾಗು ಅಂತರಾಷ್ಟ್ರೀಯ ಮಟ್ಟದಲ್ಲಿ ಉತ್ತಮ ಶಿಕ್ಷಣ ಸಂಸ್ಥೆಯಾಗಿ ಹೆಸರು ಗಳಿಸಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ದೇಶದ ಪ್ರಗತಿಯಲ್ಲಿ ಯುವಶಕ್ತಿ ಮಹತ್ವದ ಪಾತ್ರ ವಹಿಸುವುದರಿಂದ ಯುವಕರು ದೊಡ್ಡ ದೊಡ್ಡ ಗುರಿಗಳೊಂದಿಗೆ ಕನಸುಗಳನ್ನು ಕಾಣುತ್ತಾ ಕನಸನ್ನು ನನಸು ಮಾಡುವ ಕಡೆ ದೃಢ ಹೆಜ್ಜೆ ಇಡಬೇಕೆಂದು ತಿಳಿಸಿದರು.

ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್ ಅಧ್ಯಕ್ಷ ಡಾ. ಎಂ. ಪಿ. ಶ್ಯಾಮ್ ಮಾತನಾಡಿ , ಕಠಿಣ ಪರಿಶ್ರಮ, ನಿರ್ದಿಷ್ಟ ಗುರಿ, ಧ್ಯೇಯ ಉದ್ದೇಶಗಳೊಂದಿಗೆ , ಸಮಗ್ರತೆ ಮತ್ತು ವೃತ್ತಿಪರತೆಯಿಂದ ಕಾರ್ಯಪ್ರವೃತ್ತರಾಗಿ ವಿದ್ಯಾರ್ಥಿಗಳ ಉತ್ತಮ ಭವಿಷ್ಯ ರೂಪಿಸಲು ಆಡಳಿತ ಮಂಡಳಿ ಆರು ದಶಕಗಳಿಂದ ಶ್ರಮಿಸುತ್ತಿದೆ ಎಂದರು.

ಸಂಸ್ಕಾರ ಟ್ರಸ್ಟ್‌ನ ಪದಾಧಿಕಾರಿಗಳಾದ ಡಾ.ಎ.ವಿ.ಎಸ್ ಮೂರ್ತಿ, ಡಿ.ಪಿ. ನಾಗರಾಜ್, ಪ್ರಾಂಶುಪಾಲ ಡಾ. ಕೆ ಎನ್ ಸುಬ್ರಹ್ಮಣ್ಯ, ವಿವಿಧ ವಿಭಾಗಗಳ ಮುಖ್ಯಸ್ಥರು ಉಪಸ್ಥಿತರಿದ್ದರು. ಇದೆ ವೇಳೆ ಕಾಲೇಜಿನ ಹಳೆ ವಿದ್ಯಾರ್ಥಿಗಳ ಸಾಧನೆಗಳನ್ನು ಗುರುತಿಸಿ ಅವರಿಗೆ ಗೌರವ ಸಮರ್ಪಣೆಯನ್ನು ಮಾಡಲಾಯಿತು.